# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಧಾರವಾಡ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 84 ತಾಪಸ 2013, ದಿನಾಂಕ:30-03-2016.
2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 76 ವೆಚ್ಚ-12/2016, ದಿನಾಂಕ:26-02-2016.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 81 ಗ್ರಾಪಂಅ 2014, ದಿನಾಂಕ:20-06-2015.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಧಾರವಾಡ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣಾ ಮೂಲಸೌಕರ್ಯ ಅಭಿವೃದ್ಧಿ ನಿಗಮಕ್ಕೆ ವಹಿಸಿ ಸರ್ಕಾರವು ಮಂಜೂರಾತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಸದರಿ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣಾ ಮೂಲಸೌಕರ್ಯ ಅಭಿವೃದ್ಧಿ ನಿಗಮಕ್ಕೆ ವಹಿಸಲು ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999ರ ಕಲಂ 4(ಜಿ)ರಡಿಯಲ್ಲಿ ವಿನಾಯಿತಿಯನ್ನು ಆರ್ಥಿಕ ಇಲಾಖೆ ನೀಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಸದರಿ ಕಾಮಗಾರಿ ಕಟ್ಟಡವನ್ನು 7.05 ಕೋಟಿ ಅಂದಾಜು ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿದ್ದು, ಅದರಲ್ಲಿ ಮೊದಲ ಕಂತಾಗಿ ರೂ.2.35ಕೋಟಿಗಳನ್ನು ಕರ್ನಾಟಕ ಗ್ರಾಮೀಣಾ ಮೂಲಸೌಕರ್ಯ ಅಬಿವೃದ್ಧಿ ನಿಗಮ ನಿಯಮಿತ, ಬೆಂಗಳೂರು. ಇವರಿಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಪ್ರಸ್ತುತ 2016-17ನೇ ಆಯವ್ಯಯದಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿಗಾಗಿ ರೂ.8.85ಕೋಟಿಗಳನ್ನು ಒದಗಿಸಲಾಗಿದ್ದು, ಸದರಿ ಅನುದಾನದಲ್ಲಿ ರೂ.1.93ಕೋಟಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಿದೆ. ಆದುದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 84 ಗ್ರಾಪಂಅ 2014, ಬೆಂಗಳೂರು, ದಿನಾಂಕ:09-01-2017.

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, 2016-17ನೇ ಸಾಲಿನ ಆಯವ್ಯದಲ್ಲಿ ಒದಗಿಸಿರುವ ರೂ.8.85ಕೋಟಿಗಳ ಅನುದಾನದಲ್ಲಿ ರೂ.1.93(ಒಂದು ಕೋಟಿ ತೊಂಬತ್ತ ಮೂರು ಲಕ್ಷ ರೂಪಾಯಿಗಳು ಮಾತ್ರ)ಕೋಟಿಗಳನ್ನು ಧಾರವಾಡ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ನಿರ್ಮಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣಾ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ ನಿಗಮ. ಇವರಿಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಸದರಿ ಆದೇಶವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಆಇ/3/ಟಿಎಫ್‌ಪಿ/2016, ದಿನಾಂಕ:02-04-2016ರಲ್ಲಿ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಮುಂದುವರೆದು ಅನುದಾನದ ವಿನಿಯೋಗಿತ ಪ್ರಮಾಣ ಪತ್ರಗಳನ್ನು ನಿಗಧಿತ ನಮೂನೆಯಲ್ಲಿ ಹಾಗೂ ಕಟ್ಟಡ ಕಾಮಗಾರಿ ಪ್ರಗತಿ ವರದಿಯನ್ನು ಕಾಲಕಾಲಕ್ಕೆ ಸರ್ಕಾರಕ್ಕೆ ಸಲ್ಲಿಸುವುದು.

ಕಟ್ಟಡ ನಿರ್ಮಾಣ ಕಾಮಗಾರಿಯನ್ನು ನಿಗಧಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಹಸ್ತಾಂತರಿಸುವುದು.

ಕರ್ನಾಟಕ ರಾಜ್ಯಪಾರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

9/1/2017

(ಪಿ.ದೇವಸಹಾಯಂ)

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

9.1.17

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ.
5. ಗ್ರಾ.ಅ.ಪಂ.ರಾಜ್ ಇಲಾಖೆಯ ಗಣಕ ಕೋಶಕ್ಕೆ – ಇಲಾಖೆ ಗಣಕ ಜಾಲದಲ್ಲಿ ಅಳವಡಿಸಲು.
6. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾ.ಅ.ಪಂ.ರಾಜ್ ಇಲಾಖೆ – ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

ಪ್ರತಿಯನ್ನು :

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.